**CC 153/2017**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 153/2017**

**ಸಿ ಡಬ್ಲೂ - 2**
**ಪಿ ಡಬ್ಲೂ - 3**

**ಸಾಕ್ಷಿಯ ಹೆಸರು -** **ರುದ್ರೇಶ**
**ತಂದೆಯ ಹೆಸರು -** **ವೀರಭದ್ರಪ್ಪ**
**ವಯಸ್ಸು -** **40 ವರ್ಷಗಳು**
**ಉದ್ಯೋಗ -** **ಹೋಟೆಲ್ ಕೆಲಸ,**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ 20-02-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ **2**(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿಃ **3** ರ ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯನ್ನು ಸುಮಾರು **7-8** ವರ್ಷಗಳ ಹಿಂದೆ ಪೋಲಿಸ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 25-09-2016 ರಂದು ಪ್ರಕರಣದ ತನಿಖಾಧಿಕಾರಿ ಚಾಸಾ -10 ರವರು ನನ್ನ ಮತ್ತು ಚಾಸಾ -3 ರವರ ಸಮಕ್ಷಮ ಮಧ್ಯಾಹ್ನ 01.00 ರಿಂದ 02.00 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿರುತ್ತಾರೆ ಅಂದರೆ ಸರಿ. ಸದರಿ ಪಂಚನಾಮೆಯನ್ನು ಸೋನಿ ಡೆಂಟಲ್ ಕ್ಲಿನಿಕ್ ಹತ್ತಿರ ಮಾಡಲಾಗಿತ್ತು ಅಂದರೆ ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಸಿ ಪಿ ವಾಯ್., ವಕೀಲರಿಂದಃ ಇಲ್ಲಾ</u>**

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.